ಫ್ಯಾಕ್ಸ್ : [91-080]23332521

ದೂರವಾಣಿ : 23332521/23330153[259]

# ಕೃಷಿ ವಿಶ್ವವಿದ್ಯಾನಿಲಯ

ಆಡಳಿತಾಧಿಕಾರಿಗಳ ಕಛೇರಿ, ಗಾಂಧಿ ಕೃಷಿ ವಿಜ್ಞಾನ ಕೇಂದ್ರ, ಬೆಂಗಳೂರು - 560 065

ಸಂಖ್ಯೆ:ಆಕ/ ಕಾನೂನು ವಿಭಾಗ/ಸರ್ಕಾರಿ ಪತ್ರ/1523/2019–20

ದಿನಾಂಕ: 14–08–2019

## ಸುತ್ತೋಲೆ

ವಿಷಯ: ಸರ್ವೋಚ್ಚ ನ್ಯಾಯಾಲಯದ ಪ್ರಕರಣಗಳಲ್ಲಿ ಕೈಗೊಳ್ಳುವ ಕ್ರಮದ ಬಗ್ಗೆ.

ಉಲ್ಲೇಖ:
1 ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಸಚಿವಾಲಯ, ವಿಧಾನಸೌಧ, ಬೆಂಗಳೂರು ರವರ ಸುತ್ತೋಲೆ ಸಂಖ್ಯೆ: ಸಿಆಸುಇ 50 ರಾಸವಿ 2019 ದಿನಾಂಕ 08–05–2019.
2 ಸರ್ಕಾರದ ಕಾರ್ಯದರ್ಶಿ, ಕೃಷಿ ಇಲಾಖೆ, ಕರ್ನಾಟಕ ಸರ್ಕಾರ ಸಚಿವಾಲಯ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರ ಪತ್ರದ ಸಂಖ್ಯೆ: ಕೃಇ 31 ಕೃವಿಬೆ 2018 ದಿನಾಂಕ 19–06–2019.
3 ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ 13–8–2019.

><<>><<>><

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಸಚಿವಾಲಯ, ವಿಧಾನಸೌಧ, ಬೆಂಗಳೂರು ಇವರ ಉಲ್ಲೇಖ(1)ರಲ್ಲಿನ ಸುತ್ತೋಲೆಯಲ್ಲಿ ಎಸ್.ಎಲ್.ಪಿ. ದಾಖಲಿಸಬೇಕಾದಂತಹ ಪ್ರಕರಣಗಳಲ್ಲಿ ವಿಳಂಬ ಮಾಡದೆ ನಿಗಧಿತ ಅವಧಿಯೊಳಗೆ ಪ್ರಸ್ತಾವನೆ ಸಲ್ಲಿಸುವಂತೆ ಕೋರಿದ್ದರೂ ಸಹ ವಿಳಂಬವಾಗುತ್ತಿದೆ ಎಂದು ತಿಳಿಸಿರುತ್ತಾರೆ. ಇದರಿಂದ, ಅರ್ಹ ಪ್ರಕರಣಗಳಲ್ಲೂ ಸಹ ಕಾಲಮಿತಿ (limitation) ಆಧಾರದ ಮೇರೆಗೆ ಪ್ರಕರಣ ವಜಾ ಆಗುತ್ತಿರುವುದನ್ನು ಗಂಭೀರವಾಗಿ ಪರಿಗಣಿಸಲಾಗಿದೆ ಎಂದು ಉಲ್ಲೇಖಿಸಿರುತ್ತಾರೆ.

ಆ ಹಿನ್ನೆಲೆಯಲ್ಲಿ, ನ್ಯಾಯಾಲಯದ ಪ್ರಕರಣಗಳ ಕುರಿತಂತೆ ಎಲ್ಲಾ ಇಲಾಖೆಗಳು ಕಾಲಕಾಲಕ್ಕೆ ಪರಿಶೀಲಿಸತಕ್ಕದ್ದು. ಆ ಹಿನ್ನೆಲೆಯಲ್ಲಿ ಕಾನೂನು ಕೋಶದ ಮುಖ್ಯಸ್ಥರಿಂದ ಸರ್ಕಾರಿ ವಕೀಲರನ್ನು ನೇಮಕವಾದ ಬಳಿಕ ಸರ್ವೋಚ್ಚ ನ್ಯಾಯಾಲಯದಲ್ಲಿ ಮೇಲ್ಮನವಿ/ಎಸ್.ಎಲ್.ಪಿ ದಾಖಲಿಸಲಾಗಿದೆಯೇ? ಮತ್ತು ಕೌಂಟರ್ ಅಫಿಡವಿಟ್ ಹಾಗೂ ರಿಪ್ಲೈ ಅಫಿಡವಿಟ್‌ಗಳನ್ನು ಸಕಾಲದಲ್ಲಿ ದಾಖಲಿಸಲಾಗಿದೆ? ಎಂಬುದನ್ನು ಖಚಿತಪಡಿಸಿಕೊಳ್ಳುವಂತೆ ತಿಳಿಸಲಾಗಿದೆ.

ಆದ್ದರಿಂದ, ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯಕ್ಕೆ ಸಂಬಂಧಿಸಿದ ಪ್ರಕರಣಗಳಲ್ಲಿನ ಅರ್ಹ ಪ್ರಕರಣಗಳನ್ನು ಕಾಲಮಿತಿ (limitation) ಆಧಾರದ ಮೇರೆಗೆ ನ್ಯಾಯಾಲಯಕ್ಕೆ ಮೇಲ್ಮನವಿ ಸಲ್ಲಿಸುವುದಕ್ಕೆ ಆಯಾ ಕಛೇರಿಯ ಅಧಿಕಾರಿಗಳು ಕ್ರಮಕೊಳ್ಳಲು ತಿಳಿಸಲಾಗುತ್ತಿದೆ. ಅರ್ಹ ಪ್ರಕರಣಗಳನ್ನು ನಿಗದಿತ ಅವಧಿಯೊಳಗೆ ಪ್ರಸ್ತಾವನೆ/ನ್ಯಾಯಾಲಯಕ್ಕೆ ಮೇಲ್ಮನವಿ ಸಲ್ಲಿಸಿ ವಿಳಂಬವಾಗದಂತೆ ನೋಡಿಕೊಳ್ಳಬೇಕೆಂದು ಈ ಮೂಲಕ ತಿಳಿಸಲಾಗಿದೆ.

ಆಡಳಿತಾಧಿಕಾರಿಗಳು

ಪ್ರತಿಗಳು: